# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 530 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |
| ಉತ್ತರಿಸುವ ದಿನಾಂಕ | : | 24-09-2020 |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು:<br>ಈ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಸ್ಥಾಪನೆಯಾದ ಸಣ್ಣ ಕೈಗಾರಿಕೆಗಳ ಮಾಹಿತಿ ನೀಡುವುದು:<br>(ಆದೇಶದ ಪ್ರತಿಯೊಂದಿಗೆ ಸಂಪೂರ್ಣ ವಿವರವನ್ನು ನೀಡುವುದು) | ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಈ ಕೆಳಗಿನಂತಿವೆ:-<br><br>1. ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗರಿಷ್ಠ ಸಾಲ ರೂ.25.00 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಠ ರೂ.3.75 ಲಕ್ಷದಿಂದ ರೂ.8.75 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಮಹಿಳಾ ಉದ್ದಿಮೆದಾರರಿಗೆ ಶೇಕಡ 4 ರ ಬಡ್ಡಿದರದಲ್ಲಿ ರೂ.2.00 ಕೋಟಿಯವರೆಗೂ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ.<br><br>3. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>4. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ.75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು (ಗರಿಷ್ಠ 2 ಎಕರೆ) ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ.<br><br>5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ.60 ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>6. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಠ ರೂ.2.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 |

| ಕ್ರಸಂ | ಪ್ರಶ್ನೆ | ಉತ್ತರ |
| --- | --- | --- |
| | | ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50 ರಷ್ಟು ಬಡ್ಡಿರಹಿತ ಗರಿಷ್ಟ ರೂ.33.00 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br><br>7. ದಿನಾಂಕ:01-04-2017 ರಿಂದ ಮೊದಲ ಬಾರಿಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರು ಸ್ಥಾಪಿಸುವ ಸಣ್ಣ ಮತ್ತು ಅತೀ ಸಣ್ಣ ಘಟಕಗಳು ಸಾಲ ಪಡೆಯುವ ಸಂದರ್ಭದಲ್ಲಿ ಕೆ.ಎಸ್.ಎಫ್.ಸಿ ಮತ್ತು ಇತರೇ ಹಣಕಾಸು ಸಂಸ್ಥೆಯವರು ವಿಧಿಸಿರುವ ಪರಿಷ್ಕರಣಾ ಶುಲ್ಕ, ಕಾನೂನು ಶುಲ್ಕ, ಏಕಕಾಲಿಕ ಸಾಲ ವಿತರಣಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಭರಿಸಲಾಗುತ್ತಿದೆ.<br><br>8. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ಯಮಗಳು ದಿನಾಂಕ:01-04-2017 ರಿಂದ ಪ್ರಾರಂಭವಾಗಿರುವ ಹೊಸ ಸಣ್ಣ ಮತ್ತು ಅತೀ ಸಣ್ಣ ಕೈಗಾರಿಕಾ ಘಟಕಗಳಿಗೆ ಮೊದಲ 5 ವರ್ಷಗಳ ಅವಧಿಗೆ ಪ್ರತಿ ಯುನಿಟ್‌ಗೆ ರೂ.2 ರಷ್ಟು ವಿದ್ಯುಚ್ಛಕ್ತಿ ಸಹಾಯಧನ ನೀಡಲಾಗುತ್ತಿದೆ.<br><br>9. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.<br><br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆ ನೀರು ಕೊಯ್ಲು / ಸಂರಕ್ಷಣೆ ಸಹಾಯಧನ<br><br>10. ಕರ್ನಾ<br>ಟಕ ರಾಜ್ಯ ಕೃಷಿ ವಾಣಿಜ್ಯ ಮತ್ತು ಆಹಾರ ಸಂಸ್ಕರಣಾ ನೀತಿ-2015 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.<br><br>1. ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಬಡ್ಡಿ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ಕೃಷಿ ಉತ್ಪನ್ನ ಮಾರುಕಟ್ಟೆ ತೆರಿಗೆಯಿಂದ ವಿನಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಯಂತ್ರ ಸ್ಥಾಪನೆಗೆ ಸಹಾಯಧನ. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td>
ಕಳೆದ ಮೂರು ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ವರ್ಷವಾರು ಮತ್ತು ಯೋಜನೆವಾರು ಅಡಿಯಲ್ಲಿ ಸ್ಥಾಪನೆಯಾದ ಕೈಗಾರಿಕೆಗಳ ವಿವರಗಳು ಈ ಕೆಳಗಿನಂತಿವೆ.:-
<table>
<tr><th>ಯೋಜನೆ</th><th>2017–18</th><th>2018–19</th><th>2019–20</th></tr>
<tr><td>ಪ್ರಧಾನಮಂತ್ರಿ ಉದ್ಯೋಗ ಸೃಜನೆ ಯೋಜನೆ</td><td>55</td><td>50</td><td>95</td></tr>
<tr><td>ಮುಖ್ಯಮಂತ್ರಿ ಸ್ವಯಂ ಉದ್ಯೋಗ ಸೃಜನೆ ಯೋಜನೆ</td><td>23</td><td>19</td><td>23</td></tr>
<tr><td>ಕೆ.ಎಸ್.ಎಫ್.ಸಿ 10% ಬಡ್ಡಿ ಸಹಾಯಧನ</td><td colspan="3">ಈ ಯೋಜನೆಯು 2018–19 ನಿಂದ ಪ್ರಾರಂಭವಾಗಿರುತ್ತದೆ. 2018–19 ನೇ ಸಾಲಿನಲ್ಲಿ ಸಾಲ ಪಡೆದ 7 ಘಟಕಗಳು ಮತ್ತು 2019–20 ನೇ ಸಾಲಿನಲ್ಲಿ ಸಾಲ ಪಡೆದ 7 ಘಟಕಗಳು ಇನ್ನು ಅನುಷ್ಠಾನ ಹಂತದಲ್ಲಿವೆ</td></tr>
<tr><td>ವಿಶೇಷ ಘಟಕ ಉಪ ಯೋಜನೆ</td><td></td><td>3</td><td>4</td></tr>
<tr><td>ಗಿರಿಜನ ಉಪ ಯೋಜನೆ</td><td></td><td></td><td>1</td></tr>
<tr><td>ಮೇಲಿನ ಯೋಜನೆಗಳನ್ನು ಹೊರತು ಪಡಿಸಿ ಬ್ಯಾಂಕ್‌ಗಳಿಂದ ಸಾಲ ಪಡೆದು / ಸ್ವಂತ ಬಂಡವಾಳದಿಂದ ಉದ್ಯಮಶೀಲರು ಸ್ಥಾಪಿಸಿದ ಕೈಗಾರಿಕೆಗಳು</td><td>358</td><td>504</td><td>426</td></tr>
<tr><td>ಒಟ್ಟು</td><td>436</td><td>576</td><td>549</td></tr>
</table>
ಯೋಜನೆಗಳ ಆದೇಶ ಪ್ರತಿ ಲಗತ್ತಿಸಿದೆ.
</td></tr>
<tr><td>(ಆ)</td><td>ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಯಾವ ಯಾವ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳಿವೆ; ಸಣ್ಣ ಕೈಗಾರಿಕೆಗಳ ಒಂದು ಕೈಗಾರಿಕಾ ಪ್ರದೇಶ ಸ್ಥಾಪಿಸಲು ಇರುವಂತಹ ಮಾನದಂಡಗಳೇನು: (ಸಂಪೂರ್ಣ ವಿವರ ನೀಡುವುದು)</td><td>ಕೈಗಾರಿಕಾ ಪ್ರದೇಶ ಸ್ಥಾಪಿಸಲು ಈ ಕೆಳಗಿನ ಅಂಶಗಳನ್ನು ಪರಿಗಣಿಸಲಾಗುತ್ತದೆ:-<br>1. ಜಿಲ್ಲಾ ವ್ಯಾಪ್ತಿಯಲ್ಲಿ ದೊರೆಯುವ ಕಚ್ಚಾಮಾಲು<br>2. ಮಾರುಕಟ್ಟೆ ಬೇಡಿಕೆ<br>3. ತಂತ್ರಜ್ಞರ ಮತ್ತು ಮಾನವ ಸಂಪನ್ಮೂಲ ಲಭ್ಯತೆ<br>4. ಪರಿಸರ ಸಂರಕ್ಷಣೆ<br>5. ನೀರಿನ ಲಭ್ಯತೆ<br>6. ವಿದ್ಯುತ್ ಲಭ್ಯತೆ<br>7. ಉದ್ಯಮಶೀಲರಿಂದ ಕೈಗಾರಿಕೆ ಸ್ಥಾಪಿಸಲು ನಿವೇಶನದ ಬೇಡಿಕೆ<br>8. ಜಿಲ್ಲೆಯ ಅಭಿವೃದ್ಧಿಗೆ ಪೂರಕವಾದ ಅಂಶಗಳು ಮತ್ತು ನೀತಿ</td></tr>
</table>

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| | | ಅದರಂತೆ ಈ ಜಿಲ್ಲೆಯಲ್ಲಿ ಈ ಕೆಳಗಿನ ಕೈಗಾರಿಕೆಗಳನ್ನು ಸ್ಥಾಪಿಸಲು ಸೂಕ್ತವಾಗಿರುತ್ತದೆ:-<br>1. ಆಹಾರ ಆಧಾರಿತ,<br>2. ಟೆಕ್ಸ್‌ಟೈಲ್ಸ್ ಆಧಾರಿತ,<br>3. ಗ್ರಾನೈಟ್ ಕಲ್ಲು ಆಧಾರಿತ,<br>4. ಜನರಲ್ ಇಂಜಿನಿಯರಿಂಗ್,<br>5. ತೆಂಗಿನ ನಾರಿನ ಉತ್ಪನ್ನಗಳು,<br>6. ಕಾಫಿ ಪುಡಿ ತಯಾರಿಕಾ ಘಟಕಗಳು,<br>7. ಮರದ ಪೀಠೋಪಕರಣಗಳು,<br>8. ಕಟ್ಟಡ ಸಾಮಗ್ರಿಗಳು,<br>9. ಜೆಲ್ಲಿ ಕಲ್ಲು ತಯಾರಿಕೆ,<br>10. ಸಿಮೆಂಟ್ ಹಾಲೋಬಿಕ್ಸ್,<br>11. ಕೆಮಿಕಲ್ಸ್ ಇಂಡಸ್ಟ್ರೀಸ್,<br>12. ಆಯುರ್ವೇದ ಔಷಧಿಗಳ ತಯಾರಿಕೆ |
| (ಇ) | ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಿ ಅವರಿಗೆ ಸಾಲ ಸೌಲಭ್ಯ, ಸಹಾಯ ಧನ ನೀಡಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು) | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳಿಗೆ ಒದಗಿಸಲಾಗುತ್ತಿರುವ ಸಾಲಸೌಲಭ್ಯ ಮತ್ತು ಸಹಾಯಧನ ವಿವರಗಳನ್ನು ಮೇಲೆ (ಅ) ರಲ್ಲಿ ನೀಡಲಾಗಿರುತ್ತದೆ. |

ಬಿ.ಎಸ್. ಯಡಿಯೂರಪ್ಪ

*(ಬಿ.ಎಸ್.ಯಡಿಯೂರಪ್ಪ)*

ಮುಖ್ಯಮಂತ್ರಿ

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ (ಕೆ.ಎಸ್.ಎಫ್.ಸಿ) ಮೂಲಕ ಜಾರಿಗೊಳಿಸಲಾಗುತ್ತಿರುವ ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಉದ್ದಿಮೆಗಳು ಮತ್ತು ಉತ್ಪಾದನೆಗೆ ಪೂರಕವಾದ ಸೇವಾ ಚಟುವಟಿಕೆಗಳನ್ನು ಉತ್ತೇಜಿಸಲು ನೀಡಲಾಗುತ್ತಿರುವ ಬಡ್ಡಿ ಸಹಾಯಧನವನ್ನು ಶೇ.10 ರಿಂದ ಶೇ.6 ಕ್ಕೆ ಪರಿಷ್ಕೃತಗೊಳಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಸಿಐ 20 ಎಸ್ ಎಸ್ ಐ 2018 ದಿನಾಂಕ 26.09.2018.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ರವರ ಪತ್ರ ಸಂಖ್ಯೆ: ಕ.ರಾ.ಹ.ಸಂ/ಪ್ರ.ಕ/MD/202/2020-21.
3. ನಿರ್ದೇಶಕರು (ಎಂ.ಎಸ್.ಎಂ.ಇ),ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ರವರ ಪತ್ರ ಸಂಖ್ಯೆ: ಕೈವಾಇ/ಎಂ.ಎಸ್.ಎಂ.ಇ/ಕೈವಿಅ/1/2020-21, ದಿನಾಂಕ: 12.05.2019.
4. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-1 ಮತ್ತು ಬಂ.ಹೂ) ರವರ ಟಿಪ್ಪಣಿ ಸಂಖ್ಯೆ: FD 77 Exp-1/2020, ದಿನಾಂಕ: 11.06.2020 ಹಾಗೂ FD 103 Exp-1/2020, ದಿನಾಂಕ: 29.06.2020.
5. ಸಚಿವ ಸಂಪುಟದ ದಿನಾಂಕ 23.07.2020ರ ಕಾರ್ಯಸೂಚಿ ಕ್ರಮಸಂಖ್ಯೆ: 3 ಪ್ರಕರಣ ಸಂಖ್ಯೆ:ಸಿ:332/2020.
6. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-1 ಮತ್ತು ಬಂ.ಹೂ) ರವರ ಟಿಪ್ಪಣಿ ಸಂಖ್ಯೆ: ಆಇ 125 ವೆಚ್ಚ-1/2020, ದಿನಾಂಕ: 14.09.2020.

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ ಸರ್ಕಾರದ ಆದೇಶದಲ್ಲಿ ಮಾನ್ಯ ಮುಖ್ಯಮಂತ್ರಿಯವರ 2018-19 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 357 ರಲ್ಲಿ ಘೋಷಿಸಿರುವಂತೆ, ಎಲ್ಲಾ ವಿಭಾಗದ ಉದ್ಯಮಶೀಲರು ಸ್ಥಾಪಿಸುವ ಉತ್ಪಾದನಾ ವಲಯದ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ(ಎಂ.ಎಸ್.ಇ) ಘಟಕಗಳಿಗೆ ಹಾಗೂ ಈಗಾಗಲೇ ಅಸ್ತಿತ್ವದಲ್ಲಿರುವ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ ವಿಸ್ತರಣೆ/ಆಧುನೀಕರಣ/ವೈವಿಧ್ಯೀಕರಣ (Diversification)/ತಾಂತ್ರಿಕ ಉನ್ನತೀಕರಣ ಚಟುವಟಿಕೆಗಳಲ್ಲಿ ಹೂಡಿಕೆಗಾಗಿ ಸಾಲ ಪಡೆಯುವ ಘಟಕಗಳಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಮೂಲಕ ಶೇ.10 ರಷ್ಟು ಸಹಾಯಧನವನ್ನು ನೀಡಲು ಮಾರ್ಗಸೂಚಿಗಳೊಂದಿಗೆ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ರವರು ಎಲ್ಲಾ ವಿಭಾಗದ ಉದ್ಯಮಶೀಲರು ಪ್ರಾರಂಭಿಸುವ ಎಂ.ಎಸ್.ಎಂ.ಇ ಕೈಗಾರಿಕೆಗಳಿಗೆ ಕೆ.ಎಸ್.ಎಫ್.ಸಿ ಮೂಲಕ ಮಾರ್ಪಾಡುಗೊಳಿಸಿದ ಬಡ್ಡಿ ಸಹಾಯಧನ ಯೋಜನೆಗೆ 2020-21 ನೇ ಸಾಲಿನ ಆಯವ್ಯಯದಲ್ಲಿ ರೂ.45.00 ಕೋಟಿ ಮಾತ್ರ ಹಂಚಿಕೆ ಮಾಡಲಾಗಿದ್ದು, ಯೋಜನೆಯನ್ನು 2020 ರ ಜುಲೈ 31 ರವರೆಗೆ ಮುಂದುವರೆಸಲು ರೂ.10.00 ಕೋಟಿ ಹೆಚ್ಚುವರಿ ಅನುದಾನವನ್ನು ಒದಗಿಸಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ರ ಪತ್ರದಲ್ಲಿ ನಿರ್ದೇಶಕರು (ಎಂ.ಎಸ್.ಎಂ.ಇ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ರವರು ಬ್ಯಾಂಕ್ ಗಳಿಂದ ಸಾಲ ಪಡೆದು ಹೊಸದಾಗಿ, ವಿಸ್ತರಣೆಯಡಿ,

Scanned with CamScanner

ಆಧುನೀಕರಣದಡಿಯಲ್ಲಿ 2018-19, 2019-20 ನೇ ಸಾಲಿನಲ್ಲಿ ಕೈಗಾರಿಕೆ ಸ್ಥಾಪಿಸಿದ ಕೈಗಾರಿಕೋದ್ಯಮಿಗಳು ಕೊರೋನಾ ಲಾಕ್ ಡೌನ್ ನಿಂದ ಉತ್ಪಾದನೆಯಿಲ್ಲದೇ ಬ್ಯಾಂಕ್ ಗಳಿಗೆ ಬಡ್ಡಿಕಟ್ಟಲಾಗದೆ, ನಷ್ಟವನ್ನು ಅನುಭವಿಸುತ್ತಿದ್ದು, 2019-20 ನೇ ಸಾಲಿನಲ್ಲಿ ವಿವಿಧ ಕೈಗಾರಿಕಾ ನೀತಿಗಳಡಿಯಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಮಂಜೂರಾದ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಬಿಡುಗಡೆ ಮಾಡಬೇಕಾಗಿದ್ದು ಅವಶ್ಯವಿರುವುದಾಗಿ ಮತ್ತು ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡದೇ ಇದ್ದಲ್ಲಿ ಈ ಕೈಗಾರಿಕೆಗಳು ರೋಗಗ್ರಸ್ತವಾಗಿ ಶಾಶ್ವತವಾಗಿ ಮುಚ್ಚಿಹೋಗುತ್ತವೆ ಎಂದು ತಿಳಿಸುತ್ತಾ, ಕೊರೊನಾ ಪರಿಣಾಮದ ಹಿನ್ನೆಲೆಯಲ್ಲಿ ಮತ್ತು ಮೇಲೆ ತಿಳಿಸಿದ ಕಾರಣಗಳಿಂದ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ಹೂಡುವ ಹೊಸ ಬಂಡವಾಳಕ್ಕೆ ಕೆ.ಎಸ್.ಎಫ್.ಸಿ ಮೂಲಕ ನೀಡಲಾಗುವ ಸಾಲಕ್ಕೆ ಶೇ 10% ಬಡ್ಡಿ ಸಹಾಯಧನ ಯೋಜನೆಯಡಿಯಲ್ಲಿ ಅನುದಾನವನ್ನು ಕಡಿತಗೊಳಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (4) ರ ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-1 ಮತ್ತು ಬಂ.ಹೂ) ಆರ್ಥಿಕ ಇಲಾಖೆ ರವರ ಟಿಪ್ಪಣಿಯಲ್ಲಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ (ಕೆ.ಎಸ್.ಎಫ್.ಸಿ) ಮೂಲಕ ಜಾರಿಗೊಳಿಸಲಾಗುತ್ತಿರುವ ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಉದ್ದಿಮೆಗಳು ಮತ್ತು ಉತ್ಪಾದನೆಗೆ ಪೂರಕವಾದ ಸೇವಾ ಚಟುವಟಿಕೆಗಳನ್ನು ಉತ್ತೇಜಿಸಲು ನೀಡಲಾಗುತ್ತಿರುವ ಬಡ್ಡಿ ಸಹಾಯಧನವನ್ನು ಶೇ.10 ರಿಂದ ಶೇ. 6 ಕ್ಕೆ ಪರಿಷ್ಕೃತಗೊಳಿಸಲು ಷರತ್ತುಸಹಿತ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (5) ರಲ್ಲಿ ದಿನಾಂಕ 23.07.2020ರ ಕಾರ್ಯಸೂಚಿ ಕ್ರಮಸಂಖ್ಯೆ: 3 ಪ್ರಕರಣ ಸಂಖ್ಯೆ:ಸಿ:332/2020ರಲ್ಲಿ ಆರ್ಥಿಕ ಇಲಾಖೆಯು ವಿಧಿಸಿರುವ ಷರತ್ತಿಗೊಳಪಟ್ಟು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಮೂಲಕ ಜಾರಿಗೊಳಿಸಲಾಗುತ್ತಿರುವ ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಉದ್ದಿಮೆಗಳು ಮತ್ತು ಉತ್ಪಾದನೆಗೆ ಪೂರಕವಾದ ಸೇವಾ ಚಟುವಟಿಕೆಗಳನ್ನು ಉತ್ತೇಜಿಸಲು ನೀಡಲಾಗುತ್ತಿರುವ ಬಡ್ಡಿ ಸಹಾಯಧನವನ್ನು ಶೇ.10 ರಿಂದ ಶೇ.6 ಕ್ಕೆ ಪರಿಷ್ಕೃತಗೊಳಿಸಿ ಸಚಿವ ಸಂಪುಟವು ಅನುಮೋದನೆ ನೀಡಿರುತ್ತದೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, 2018-19 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-357 ರ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ (ಕೆ.ಎಸ್.ಎಫ್.ಸಿ) ಮೂಲಕ ಜಾರಿಗೊಳಿಸಲಾಗುತ್ತಿರುವ ಸೂಕ್ಷ್ಮ ಮತ್ತು ಸಣ್ಣ ಉತ್ಪಾದನಾ ಉದ್ದಿಮೆಗಳು ಮತ್ತು ಉತ್ಪಾದನೆಗೆ ಪೂರಕವಾದ ಸೇವಾ ಚಟುವಟಿಕೆಗಳನ್ನು ಉತ್ತೇಜಿಸಲು ನೀಡಲಾಗುತ್ತಿರುವ ಬಡ್ಡಿ ಸಹಾಯಧನವನ್ನು ಶೇ.10 ರಿಂದ ಶೇ.6 ಕ್ಕೆ ಪರಿಷ್ಕೃತಗೊಳಿಸಿ ಷರತ್ತಿಗೊಳಪಟ್ಟು 2020-21 ನೇ ಸಾಲಿನಿಂದ ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿರುತ್ತದೆ ಆದ್ದರಿಂದ ಈ ಆದೇಶ:

**<u>ಸರ್ಕಾರಿ ಆದೇಶ ಸಂಖ್ಯೆ: ಸಿಐ 42 ಸಪ್ರುಕ್ಕೆ 2020, ಬೆಂಗಳೂರು, ದಿನಾಂಕ:16.09.2020.</u>**

ಈ ಮೇಲಿನ ಪ್ರಸ್ತಾವನೆಗಳಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ (ಕೆ.ಎಸ್.ಎಫ್.ಸಿ) ಮೂಲಕ ಜಾರಿಗೊಳಿಸಲಾಗುತ್ತಿರುವ ಸೂಕ್ಷ್ಮ ಮತ್ತ ಸಣ್ಣ ಉತ್ಪಾದನಾ ಉದ್ದಿಮೆಗಳು ಮತ್ತು ಉತ್ಪಾದನೆಗೆ ಪೂರಕವಾದ ಸೇವಾ ಚಟುವಟಿಕೆಗಳನ್ನು ಉತ್ತೇಜಿಸಲು ಶೇ.10ರಷ್ಟು ಬಡ್ಡಿ ಸಹಾಯಧನವನ್ನು ನೀಡಲು ಹೊರಡಿಸಿದ್ದ ಸರ್ಕಾರದ ಆದೇಶ ಸಂಖ್ಯೆ ಸಿಐ 20 ಸಪ್ರುಕ್ಕೆ 2018 ದಿನಾಂಕ 26.09.2018ನ್ನು ಮಾರ್ಪಡಿಸಿ ಪ್ರಸ್ತುತ ಬಡ್ಡಿ ಸಹಾಯಧನವನ್ನು ಶೇ.10 ರಿಂದ ಶೇ.6 ಕ್ಕೆ ಪರಿಷ್ಕೃತಗೊಳಿಸಿ ಅನುಷ್ಠಾನಗೊಳಿಸಲು ಈ ಕೆಳಗಿನ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

1. ಈಗಾಗಲೇ ಹೊರಡಿಸಿದ ಸರ್ಕಾರದ ಆದೇಶ ಸಂಖ್ಯೆ ಸಿಐ 20 ಎಸ್ ಎಸ್ ಐ 2018 ದಿನಾಂಕ 26.9.2018 ರಲ್ಲಿರುವ ಮಾರ್ಗಸೂಚಿಯಲ್ಲಿ ಬಡ್ಡಿ ಸಹಾಯಧನವನ್ನು ಶೇ. 10 ರಿಂದ ಶೇ.6ಕ್ಕೆ ಪರಿಷ್ಕೃತಗೊಳಿಸಿ ಅನುಷ್ಠಾನಗೊಳಿಸತಕ್ಕದ್ದು. ಇತರೆ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

Scanned with CamScanner

2. ಈಗಾಗಲೇ 2020-21ನೇ ಸಾಲಿನಲ್ಲಿ ಕೆ.ಎಸ್.ಎಫ್.ಸಿ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ಉತ್ಪಾದನಾ ಉದ್ದಿಮೆಗಳು ಮತ್ತು ಉತ್ಪಾದನೆಗೆ ಪೂರಕವಾದ ಸೇವಾ ಚಟುವಟಿಕೆಗಳನ್ನು ಉತ್ತೇಜಿಸಲು ಜುಲೈ-2020ರ ಅಂತ್ಯದವರೆಗೆ ಮಂಜೂರಾಗಿ, ಸಾಲದ ಮೊದಲ ಕಂತು ಬಿಡುಗಡೆ ಮಾಡಲಾಗಿರುವ ಸಾಲಗಳ ಮೇಲೆ ಶೇ.10 ರಷ್ಟು ಬಡ್ಡಿ ಸಹಾಯಧನವನ್ನು ನೀಡತಕ್ಕದ್ದು.

3. 2020-21ನೇ ಸಾಲಿನಲ್ಲಿ ಆಗಸ್ಟ್ 1ರ ನಂತರ ಕೆ.ಎಸ್.ಎಫ್.ಸಿ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ಉತ್ಪಾದನಾ ಉದ್ದಿಮೆಗಳು ಮತ್ತು ಉತ್ಪಾದನೆಗೆ ಪೂರಕವಾದ ಸೇವಾ ಚಟುವಟಿಕೆಗಳನ್ನು ಉತ್ತೇಜಿಸಲು ಮಂಜೂರಾದ / ಸಾಲದ ಮೊದಲ ಕಂತು ಬಿಡುಗಡೆ ಮಾಡಲಾಗುವ ಸಾಲಗಳ ಮೇಲೆ ಶೇ.6 ರಷ್ಟು ಬಡ್ಡಿ ಸಹಾಯಧನವನ್ನು ನೀಡತಕ್ಕದ್ದು.

4. 2020-21ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ಒದಗಿಸಲಾದ ರೂ.50.00 ಕೋಟಿ ಅನುದಾನವನ್ನು ಕೆ.ಎಸ್.ಎಫ್.ಸಿ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕಾ ಉತ್ಪಾದನಾ ಉದ್ದಿಮೆಗಳು ಮತ್ತು ಉತ್ಪಾದನೆಗೆ ಪೂರಕವಾದ ಸೇವಾ ಚಟುವಟಿಕೆಗಳನ್ನು ಉತ್ತೇಜಿಸಲು ಜುಲೈ ಅಂತ್ಯದವರೆಗೆ ಮಂಜೂರಾಗಿ ಮೊದಲ ಕಂತು ಬಿಡುಗಡೆ ಮಾಡಲಾಗಿರುವ ಸಾಲಗಳು (10%) ಹಾಗೂ ಆಗಸ್ಟ್ 1 ರ ನಂತರ ಮಂಜೂರಾದ ಬಿಡುಗಡೆಯಾಗುವ ಸಾಲಗಳಿಗೆ (6%) ಹಾಗೂ ಬಾಕಿಯಿರುವ ಮೊದಲ ಪೀಳಿಗೆಯ ಉದ್ದಿಮೆದಾರರಿಗೆ ನೀಡಲಾಗಿರುವ ಸಾಲದ ಮೇಲಿನ ಬಡ್ಡಿ ಸಹಾಯಧನಗಳಿಗೆ ಸೇರಿ ಉಪಯೋಗಿಸತಕ್ಕದ್ದು.

5. ಸೂಕ್ತ ಆಯವ್ಯಯ ಹಂಚಿಕೆಯನ್ನು ಖಚಿತಪಡಿಸಿಕೊಳ್ಳದೇ ಈ ಯೋಜನೆಯಡಿ ಸರ್ಕಾರದ ಅನುಮೋದನೆ ಇಲ್ಲದೇ ಹೆಚ್ಚುವರಿ ಆರ್ಥಿಕ ಹೊರೆಯನ್ನು ಸೃಜಿಸಬಾರದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿಗಳ ಸಂಖ್ಯೆ: FD 77 Exp-1/2020, ದಿನಾಂಕ 11.06.2020 FD 103 Exp-1/2020, ದಿನಾಂಕ: 29.06.2020 ಹಾಗೂ ಆಇ 125 ವೆಚ್ಚ-1/2020, ದಿನಾಂಕ: 14.09.2020 ರಲ್ಲಿ ನೀಡಿರುವ ಷರತ್ತುಸಹಿತ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Rlatha
(ಆರ್. ಲತಾ)
ಪೀಠಾಧಿಕಾರಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
4. ಆಯುಕ್ತರು, ಕೈಗಾರಿಕಾಭಿವೃದ್ಧಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.

Scanned with CamScanner

5. ನಿರ್ದೇಶಕರು (ಎಂ.ಎಸ್.ಎಂ.ಇ.), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.
6. ವ್ಯವಸ್ಥಾಪಕ ನಿರ್ದೇಶಕರು, ನಿರ್ದೇಶಕರು, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ, ಬಿ.ಎಂ.ಟಿ.ಸಿ ಕಾಂಪ್ಲೆಕ್ಸ್, ಡಬಲ್ ರೋಡ್, ಶಾಂತಿ ನಗರ, ಬೆಂಗಳೂರು-27.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್ (ಕೆ.ಸಿ.ಟಿ.ಯು) ರಾಜಾಜಿನಗರ ಕೈಗಾರಿಕಾ ಪ್ರದೇಶ, ವೆಸ್ಟ್ ಆಫ್ ಕಾರ್ಡ್ ರಸ್ತೆ, ರಾಜಾಜಿನಗರ, ಬೆಂಗಳೂರು-10.
8. ಅಪರ ನಿರ್ದೇಶಕರು, (ಎಂ.ಎಸ್.ಎಂ.ಇ & ಪಿ.ಪಿ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.
9. ಅಪರ ನಿರ್ದೇಶಕರು, (ಜಿಕೈಕೇ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.
10. ಮಾನ್ಯ ಮುಖ್ಯಮಂತ್ರಿಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ ವಿಧಾನ ಸೌಧ, ಬೆಂಗಳೂರು-01.
11. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು-01.
12. ಜಂಟಿ ನಿರ್ದೇಶಕರು (ಯೋಜನೆ), ಕೈಗಾರಿಕೆ. ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-01.
13. ಉಪ ನಿರ್ದೇಶಕರು, TNMC, ವಾಣಿಜ್ಯ ತೆರಿಗೆ ಕಛೇರಿ, ಗಾಂಧಿ ನಗರ, ಬೆಂಗಳೂರು-01.
14. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು 01.
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1 ಮತ್ತು ಬಂ.ಹೂ), ವಿಧಾನಸೌಧ ಬೆಂಗಳೂರು-01
16. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು-01.
17. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, (ಎಂ.ಎಸ್.ಎಂ.ಇ. & ಗಣಿ) ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು-01.
18. ಸರ್ಕಾರದ ಅಧೀನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, (ಸೇವೆಗಳು ಮತ್ತು ಸಮನ್ವಯ), ವಿಕಾಸಸೌಧ, ಬೆಂಗಳೂರು-01.
19. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆ ಮಾಡುವ ಕೈಗಾರಿಕಾ ನಿವೇಶನಕ್ಕೆ ಹಾಲಿ ನೀಡುತ್ತಿರುವ ಸಹಾಯಧನವನ್ನು ಶೇಕಡ 50 ರಿಂದ ಶೇಕಡ 75ಕ್ಕೆ ಹೆಚ್ಚಿಸಿ ಜಾರಿಗೊಳಿಸುವ ಕುರಿತು.

ಓದಲಾಗಿದೆ:

1. ಸರ್ಕಾರಿ ಆದೇಶ ಸಂಖ್ಯೆ: ಸಿಐ 81 ಸಿ ಎಸ್ ಸಿ 2016, ದಿನಾಂಕ:27.06.2016.
2. ಸರ್ಕಾರದ ಉಪ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ, ರವರ ಅನಧಿಕೃತ ಟಿಪ್ಪಣಿ ದಿನಾಂಕ:01.07.2019 ದೊಂದಿಗೆ ಲಗತ್ತಿಸಲಾದ ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅನುಸೂಚಿತ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟುಗಳ ಉಪಹಂಚಿಕೆ(ಯೋಜನೆ ರೂಪಿಸುವುದು,ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ-2013 ರ ಪ್ರಕಾರ ದಿನಾಂಕ:04.06.2019 ರಂದು ನಡೆದ ರಾಜ್ಯ ಅನುಸೂಚಿತ ಜಾತಿಗಳ/ ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆಯ ನಡವಳಿಗಳು.
3. ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ), ಸಮಾಜ ಕಲ್ಯಾಣ ಇಲಾಖೆ ರವರ ಅನಧಿಕೃತ ಟಿಪ್ಪಣಿ ದಿನಾಂಕ:23.07.2019
4. ದಿನಾಂಕ 20-08-2019 ರಂದು ನಿರ್ದೇಶಕರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.
5. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-1 ಮತ್ತು ಬಂ.ಹೂ), ಆರ್ಥಿಕ ಇಲಾಖೆ ರವರ ಟಿಪ್ಪಣಿ ಸಂಖ್ಯೆ: FD 196 EXP-1/19, ದಿನಾಂಕ: 04.01.2019.
6. ಸರ್ಕಾರದ ಅಧೀನ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ ರವರ ಅ.ಟಿ. ಸಂಖ್ಯೆ: ಸಕಇ 23 ಎಸ್‌ಎಲ್ ಪಿ 2020 ದೊಂದಿಗೆ ಲಗತ್ತಿಸಲಾದ ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 19.03.2020 ರಂದು ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕೈಗಾರಿಕಾ ನಿವೇಶನಗಳನ್ನು ಹಾಲಿ ಇರುವ ಸಹಾಯಧನ ಮಿತಿಯನ್ನು ಶೇಕಡ 50 ರಿಂದ ಶೇಕಡ 75ಕ್ಕೆ ಹೆಚ್ಚಿಸುವ ಬಗ್ಗೆ ನಡೆದ ಸಭಾ ನಡವಳಿಗಳು.

* * * * *

### ಪ್ರಸ್ತಾವನೆ:

**ಮೇಲೆ ಓದಲಾದ ಕ್ರಮ ಸಂಖ್ಯೆ (1)** ರ ಆದೇಶದಲ್ಲಿ 2016-17 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿರುವಂತೆ ಪರಿಶಿಷ್ಟ ಜಾತಿ/ಪಂಗಡದ ಉದ್ಯಮಿಗಳಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ (ಕೆ.ಎಸ್.ಎಸ್.ಐ.ಡಿ.ಸಿ) ಸಂಸ್ಥೆಗಳಿಂದ ಕೈಗಾರಿಕಾ ನಿವೇಶನ/ಮಳಿಗೆಗಳನ್ನು ಶೇ.50 ರ ರಿಯಾಯಿತಿ ದರದಲ್ಲಿ ಈ ಕೆಳಕಂಡ ನಿಬಂಧನೆಗಳಿಗೊಳಪಡಿಸಿ ಹಂಚಿಕೆ ಮಾಡಲು ಅನುಮೋದನೆ ನೀಡಲಾಗಿದೆ.

- ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆಯಾಗುವ ಕೈಗಾರಿಕಾ ನಿವೇಶನ/ಮಳಿಗೆಯ ಶೇ.50 ರ ರಿಯಾಯಿತಿ ಮೌಲ್ಯವನ್ನು ಸರ್ಕಾರದಿಂದ ಸಂಬಂಧಿಸಿದ ಸಂಸ್ಥೆಗಳಿಗೆ (ಕೆ.ಎಸ್.ಎಸ್.ಐ.ಡಿ.ಸಿ/ಕೆ.ಐ.ಎ.ಡಿ.ಬಿ) ಪಾವತಿ ಮಾಡುವುದು.

Scanned with CamScanner

- ಈ ಶೇ.50ರ ರಿಯಾಯಿತಿ ಮೌಲ್ಯವನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ (SCSP/TSP) ಅಡಿಯಲ್ಲಿ ಹಂಚಿಕೆಯಾಗುವ ಆಯವ್ಯಯದಿಂದ ಭರಿಸತಕ್ಕದ್ದು ಮತ್ತು (SCSP/TSP) ಯೋಜನೆಯಡಿಯಲ್ಲಿ ಈ ಕಾರ್ಯಕ್ರಮಕ್ಕೆ ರೂಪಿಸಲಾಗಿರುವ ಮಾರ್ಗಸೂಚಿಗಳನ್ನು ಪಾಲಿಸತಕ್ಕದ್ದು.

- ಹಂಚಿಕೆ ಪಡೆದ ಉದ್ದಿಮೆದಾರರಿಂದ ನಿವೇಶನ/ಮಳಿಗೆಯ ಶೇ.25ರಷ್ಟು ಮೌಲ್ಯವನ್ನು ಮೊದಲು (Upfront) ಸಂಬಂಧಿಸಿದ ಸಂಸ್ಥೆಗಳು ಪಡೆದುಕೊಳ್ಳತಕ್ಕದ್ದು. ನಂತರ, ಉಳಿದ ಶೇ.25 ರಷ್ಟು ನಿವೇಶನ/ಮಳಿಗೆಯ ಮೌಲ್ಯದ ಮೊತ್ತವನ್ನು 8 ಸಮ ತ್ರೈಮಾಸಿಕ ಕಂತುಗಳಲ್ಲಿ ಸೂಕ್ತ ಬಡ್ಡಿ ದರದೊಂದಿಗೆ ವಸೂಲಾತಿ ಮಾಡಿಕೊಳ್ಳತಕ್ಕದ್ದು.

**ಮೇಲೆ ಓದಲಾದ ಕ್ರಮ ಸಂಖ್ಯೆ (2)** ರ ಸರ್ಕಾರದ ಉಪ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ, ರವರ ಅನಧಿಕೃತ ಟಿಪ್ಪಣಿಯೊಂದಿಗೆ ಲಗತ್ತಿಸಲಾಗಿರುವ ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟುಗಳ ಉಪಹಂಚಿಕೆ (ಯೋಜನೆ ರೂಪಿಸುವುದು,ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ-2013 ರ ಪ್ರಕಾರ ದಿನಾಂಕ: 04.06.2019 ರಂದು ನಡೆದ ರಾಜ್ಯ ಅನುಸೂಚಿತ ಜಾತಿಗಳ/ ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಸಭೆಯ ನಡವಳಿಗಳಲ್ಲಿ ಕೈಗಾರಿಕಾ ನಿವೇಶನ ನೀಡುವಲ್ಲಿ ಹಾಲಿ ಇರುವ ಸಹಾಯಧನ ಮಿತಿಯನ್ನು ಶೇ.50 ರಿಂದ ಶೇ.75 ಕ್ಕೆ ಹೆಚ್ಚಿಸಲು ಅನುಮೋದನೆ ನೀಡಲಾಗಿದೆ.

**ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಅನಧಿಕೃತ ಟಿಪ್ಪಣಿಯಲ್ಲಿ ವಿವರಿಸಲಾಗಿರುವಂತೆ,** ಪರಿಶಿಷ್ಟ ಜಾತಿ/ಪಂಗಡದ ಅನೇಕ ನಿರುದ್ಯೋಗಿ ಯುವಕ/ಯುವತಿಯರು ನಿವೇಶನ ಮಂಜೂರಾಗಿದ್ದರೂ ಸಹ ಹಣವನ್ನು ಪಾವತಿಸಲು ಸಾಧ್ಯವಾಗುವುದಿಲ್ಲವೆಂದು ಕೋರಿ ಕೆಲವು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಶಾಸಕರು ಮಾನ್ಯ ಮುಖ್ಯಮಂತ್ರಿಯವರಿಗೆ ಮನವಿ ಸಲ್ಲಿಸಿದ್ದು, ಸದರಿ ಸೌಲಭ್ಯವನ್ನು 2018-19 ನೇ ಸಾಲಿನಿಂದ ಪೂರ್ವಾನ್ವಯವಾಗಿ ಜಾರಿಗೊಳಿಸಲು ಆದೇಶ ಹೊರಡಿಸಲು ಕೋರಲಾಗಿರುತ್ತದೆ.

**ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ** ದಿನಾಂಕ: 20.08.2019 ರಂದು ನಿರ್ದೇಶಕರು, ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕೈಗಾರಿಕಾ ನಿವೇಶನ ನೀಡುವಲ್ಲಿ ಹಾಲಿ ಇರುವ ಸಹಾಯಧನ ಮಿತಿಯನ್ನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳೊಂದಿಗೆ ಶೇ.50% ರಿಂದ ಶೇ 75%ಕ್ಕೆ ಹೆಚ್ಚಿಸಿ ಜಾರಿಗೊಳಿಸುವ ಕುರಿತಂತೆ ಚರ್ಚಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ:

- ಒಬ್ಬ ಉದ್ಯಮಿಗೆ ಒಂದು ಬಾರಿಗೆ ಮಾತ್ರ ಗರಿಷ್ಠ 2 ಎಕರೆ ಕೈಗಾರಿಕಾ ನಿವೇಶನಕ್ಕೆ ಶೇ.75 ರಂತೆ ರಿಯಾಯಿತಿ ದರದಲ್ಲಿ ಜಿಲ್ಲೆಗಳಲ್ಲಿ ಹಂಚಿಕೆ ಮಾಡಬಹುದು. ಆದರೆ, ಬೆಂಗಳೂರು (ನಗರ) ಮತ್ತು ಬೆಂಗಳೂರು (ಗ್ರಾಮಾಂತರ) ಜಿಲ್ಲೆಗಳಲ್ಲಿ ಭೂಮಿಯ ಬೆಲೆಯು ದುಬಾರಿಯಾಗುವುದರಿಂದ ಗರಿಷ್ಠ 1 ಎಕರೆ ಕೈಗಾರಿಕಾ ನಿವೇಶನಕ್ಕೆ ಸೀಮಿತಗೊಳಿಸಿದಂತೆ ರಿಯಾಯಿತಿ ದರವನ್ನು ಪರಿಗಣಿಸುವುದು.
- ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆಯಾಗುವ ಕೈಗಾರಿಕಾ ನಿವೇಶನಗಳನ್ನು ಮೂಲಭೂತ ಸೌಕರ್ಯ ಕಲ್ಪಿಸಿ ಪೂರ್ಣ ಪ್ರಮಾಣದಲ್ಲಿ ಉದ್ದಿಮೆ ಸ್ಥಾಪನೆಗೆ ಗರಿಷ್ಠ 3 ವರ್ಷಗಳ ಕಾಲ ಅವಕಾಶ ನೀಡುವುದು.
- ಉದ್ದಿಮೆಯನ್ನು ಯಾವುದೇ ಸಂವಿಧಾನದಡಿ ಸ್ಥಾಪಿಸಿದಲ್ಲಿ ಎಲ್ಲಾ ಸ್ಥಾಪಕರು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.
- ಹಂಚಿಕೆ ಪತ್ರದಲ್ಲಿನ ಮೊತ್ತದ ಶೇ.10 ರಷ್ಟು ಮೊತ್ತವನ್ನು ಮಾತ್ರ ಪಾವತಿಸಿ ನಂತರ ನಿವೇಶನವನ್ನು ಫಲಾನುಭವಿಗೆ ಸ್ವಾಧೀನ ಪತ್ರದ ಮೂಲಕ ನೀಡಿ ಉಳಿದ ಶೇ.15 ರಷ್ಟು ಮೊತ್ತವನ್ನು ಸ್ವಾಧೀನ ಪತ್ರ ವಿತರಿಸಿದ ದಿನಾಂಕದಿಂದ 8 ತ್ರೈಮಾಸಿಕ ಸಮ ಕಂತುಗಳಲ್ಲಿ ನಿಗಮ ಹಾಗೂ ಮಂಡಳಿಯು ಫಲಾನುಭವಿಯಿಂದ ಪಡೆಯುವುದು.
- ಸದರಿ ನಿಯಮಾವಳಿಯಂತೆ ಕೈಗಾರಿಕಾ ನಿವೇಶನವನ್ನು 10 ವರ್ಷಗಳ ಅವಧಿಗೆ ಲೀಸ್ ಕಂ ಸೇಲ್ ಆಧಾರದ ಮೇಲೆ ಸ್ವಾಧೀನ ನೀಡಲಾಗುತ್ತಿದ್ದು, ಇದನ್ನು 12 ವರ್ಷಗಳ ಅವಧಿಗೆ ವಿಸ್ತರಿಸಿ ನಿಗಧಿಪಡಿಸುವುದು.

Scanned with CamScanner

ಮೇಲೆ ಓದಲಾದ ಕ್ರಮ ಸಂಖ್ಯೆ (6) ರ **ಅನಧಿಕೃತ ಟಿಪ್ಪಣಿಯಲ್ಲಿ ಲಗತ್ತಿಸಿರುವ** ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 19.03.2020 ರಂದು ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕೈಗಾರಿಕಾ ನಿವೇಶನಗಳನ್ನು ಖಾಲಿ ಇರುವ ಸಹಾಯಧನ ಮಿತಿಯನ್ನು ಶೇಕಡ 50 ರಿಂದ ಶೇಕಡ 75ಕ್ಕೆ ಹೆಚ್ಚಿಸುವ ಬಗ್ಗೆ ನಡೆದ ಸಭಾ ನಡವಳಿಗಳನ್ನು ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಲಾಗಿರುತ್ತದೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 76 ಸಪ್ರಕೈ 2019, ಬೆಂಗಳೂರು, ದಿನಾಂಕ: 28.05.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕೈಗಾರಿಕಾ ನಿವೇಶನ ನೀಡುವಲ್ಲಿ ಹಾಲಿ ಇರುವ ಸಹಾಯಧನವನ್ನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳೊಂದಿಗೆ ಶೇಕಡ 50 ರಿಂದ ಶೇಕಡ 75 ಕ್ಕೆ ಹೆಚ್ಚಿಸಿ ಜಾರಿಗೊಳಿಸಲಾಗಿದೆ:

1. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಹಂಚಿಕೆಯಾಗುವ ಕೈಗಾರಿಕಾ ನಿವೇಶನಗಳನ್ನು ಮೂಲಭೂತ ಸೌಕರ್ಯ ಕಲ್ಪಿಸಿ ಪೂರ್ಣ ಪ್ರಮಾಣದಲ್ಲಿ ಉದ್ದಿಮೆ ಸ್ಥಾಪನೆಗೆ ಗರಿಷ್ಠ 3 ವರ್ಷಗಳ ಕಾಲಾವಕಾಶ ನೀಡುವುದು.

2. ಉದ್ದಿಮೆಯನ್ನು ಯಾವುದೇ ಸಂವಿಧಾನದಡಿ ಸ್ಥಾಪಿಸಿದಲ್ಲಿ ಎಲ್ಲಾ ಸ್ಥಾಪಕರು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರತಕ್ಕದ್ದು.

3. ಹಂಚಿಕೆ ಪತ್ರದಲ್ಲಿನ ಮೊತ್ತದ ಶೇ.10 ರಷ್ಟು ಮೊತ್ತವನ್ನು ಮಾತ್ರ ಪಾವತಿಸಿ ನಂತರ ನಿವೇಶನವನ್ನು ಫಲಾನುಭವಿಗೆ ಸ್ವಾಧೀನ ಪತ್ರದ ಮೂಲಕ ನೀಡಿ ಉಳಿದ ಶೇ.15 ರಷ್ಟು ಮೊತ್ತವನ್ನು ಸ್ವಾಧೀನ ಪತ್ರ ವಿತರಿಸಿದ ದಿನಾಂಕದಿಂದ 8 ತ್ರೈಮಾಸಿಕ ಸಮ ಕಂತುಗಳಲ್ಲಿ ನಿಗಮ ಹಾಗೂ ಮಂಡಳಿಯು ಫಲಾನುಭವಿಯಿಂದ ವಸೂಲಾತಿ ಮಾಡಿಕೊಳ್ಳತಕ್ಕದ್ದು.

4. ಕೈಗಾರಿಕಾ ನಿವೇಶನವನ್ನು 10 ವರ್ಷಗಳ ಅವಧಿಗೆ ಲೀಸ್ ಕಂ ಸೇಲ್ ಆಧಾರದ ಮೇಲೆ ಹಂಚಿಕೆ ಮಾಡುವುದು ಹಾಗೂ ಈ ಅವಧಿಯಲ್ಲಿ ವರ್ಗಾಯಿಸಲು ಸಾಧ್ಯವಿಲ್ಲ.

5. ನಿವೇಶನ (ಎ&ಬಿ ಶೆಡ್ ಸೇರಿ) ನೀಡುವ ದರದಲ್ಲಿ 75% ರಷ್ಟು ಅಥವಾ ಗರಿಷ್ಠ ರೂ. 2.00 ಕೋಟಿ ಸಹಾಯಧನ ಮಿತಿಯೊಳಗೆ ಯಾವುದು ಕಡಿಮೆಯೋ ಅದನ್ನು ನೀಡುವುದು. ಸಹಾಯಧನ ಹೊರತುಪಡಿಸಿ ಉಳಿದ ವೆಚ್ಚವನ್ನು ಫಲಾನುಭವಿಗಳು ಭರಿಸುವುದು. ಸದರಿ ಸೌಲಭ್ಯವನ್ನು ಎಸ್.ಸಿ/ಎಸ್.ಟಿ ಉದ್ದಿಮೆದಾರರಿಗೆ ಮೀಸಲಿರಿಸಿರುವ ಮಳಿಗೆಗಳಿಗೂ ವಿಸ್ತರಿಸುವುದು.

6. ಒಂದು ಉದ್ಯಮಿಗೆ ಗರಿಷ್ಠ 2 ಎಕರೆ ಕೈಗಾರಿಕಾ ನಿವೇಶನಕ್ಕೆ ಶೇ.75 ರಂತೆ ರಿಯಾಯಿತಿ ದರದಲ್ಲಿ ಹಂಚಿಕೆ ಮಾಡುವುದು. ಒಬ್ಬರೇ ಉದ್ಯಮಿಯು ಹಲವು ಕಂಪನಿಗಳಿಗೆ ಪ್ರವರ್ತಕರಾಗಿದ್ದಲ್ಲಿ, ಒಂದು ಬಾರಿ ಮಾತ್ರ ಈ ಸೌಲಭ್ಯ ನೀಡುವುದು ಮತ್ತು ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಈ ಸೌಲಭ್ಯ ನೀಡುವುದು.

7. 75% ರಷ್ಟು ಸಹಾಯಧನದ ಯೋಜನೆಯು ಹೊಸದಾಗಿ ಕೈಗಾರಿಕಾ ನಿವೇಶನ ಹಂಚಿಕೆ ಮಾಡುವ ಪ್ರಕರಣಗಳಿಗೆ ಅನ್ವಯಿಸುತ್ತದೆ. ಆದರೆ, 2019-20ನೇ ಸಾಲಿನಲ್ಲಿ 50% ಸಹಾಯಧನ ಯೋಜನೆಯಡಿ ಈಗಾಗಲೇ ಕೈಗಾರಿಕಾ ನಿವೇಶನಗಳನ್ನು ಪಡೆದು ನಿಯಮಾನುಸಾರ ಒಡಂಬಡಿಕೆ ಮತ್ತು ಪಾವತಿ ಇತ್ಯಾದಿ ಮಾಡಿರುವ ಪ್ರಕರಣಗಳನ್ನು ಅದೇ ಮಿತಿಯಲ್ಲಿ ಮುಂದುವರೆಸುವುದು.

Scanned with CamScanner

8. ಭೂ ಸಹಾಯಧನ ಹೊರತುಪಡಿಸಿದ ಇತರ ಸಹಾಯಧನ /ರಿಯಾಯಿತಿಗಳನ್ನು ಚಾಲ್ತಿಯಲ್ಲಿರುವ ಕೈಗಾರಿಕಾ ನೀತಿಯ ಪ್ರಕಾರ ನೀಡುವುದು.

ಇಲಾಖೆಯು/ ಜಾರಿಗೊಳಿಸುವ ಸಂಸ್ಥೆಯು ಎಸ್ ಸಿಪಿ/ಟಿಎಸ್ ಪಿ ಯೋಜನೆಯಡಿ ಸದರಿ ಯೋಜನೆಗೆ ಆಯಾ ವರ್ಷ ಲಭ್ಯವಿರುವ ಆಯವ್ಯಯಕ್ಕೆ ಅನುಗುಣವಾಗಿ ಫಲಾನುಭವಿ ಘಟಕಗಳ ಸಂಖ್ಯೆಯನ್ನು ನಿರ್ಬಂಧಿಸುವುದು ಮತ್ತು ಮುಂಬರುವ ವರ್ಷಗಳಲ್ಲಿ ಆಯವ್ಯಯವನ್ನು ನಿರೀಕ್ಷಿಸಿ ಸದರಿ ಯೋಜನೆಗೆ ವೆಚ್ಚ (committed liability) ಉಂಟುಮಾಡಬಾರದು. ಈ ಕುರಿತು ಪ್ರತ್ಯೇಕ ಮಾನದಂಡಗಳನ್ನು ಹೊರಡಿಸಲಾಗುವುದು.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: FD 196 EXP-1/19, ದಿನಾಂಕ: 04.01.2019 ರಲ್ಲಿ ಷರತ್ತುಗಳೊಂದಿಗೆ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Rlatha

[ಆರ್.ಲತಾ]
**ಪೀಠಾಧಿಕಾರಿ [ಸಪ್ರಕೈ],**
**ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.**

ಇವರಿಗೆ:

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ ಕಳುಹಿಸಲಾಗಿದೆ. ತದನಂತರ, ಪ್ರಕಟಗೊಂಡ ಸಂಚಿಕೆಗಳ 25 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.**

ಪ್ರತಿಯನ್ನು:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು-01.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ ,ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01
6. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಎಂ ಎಸ್ ಎಂ ಇ, ಗಣಿ ಮತ್ತು ಗಣಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.
7. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು-01.
8. ಆಯುಕ್ತರು, ಕೈಗಾರಿಕಾಭಿವೃದ್ಧಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
9. ನಿರ್ದೇಶಕರು (ಎಂ.ಎಸ್.ಎಂ.ಇ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
10. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯ ನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB), ರಾಷ್ಟ್ರೋತ್ಥಾನ ಪರಿಷತ್ ಭವನ, ನೃಪತುಂಗ ರಸ್ತೆ, ಬೆಂಗಳೂರು-01.

Scanned with CamScanner

11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ (KSSIDC), ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು.

10. ಹಿರಿಯ ನಿರ್ದೇಶಕರು (ಪಿಎಫ್‌ಆರ್), ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
11. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು-1.
12. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ,ವಿಧಾನಸೌಧ, ಬೆಂಗಳೂರು-01.
13. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನಸೌಧ, ಬೆಂಗಳೂರು-01.
14. ಸರ್ಕಾರದ ಅಧೀನ ಕಾರ್ಯದರ್ಶಿ(ಸಮನ್ವಯ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-01.(ಮಲ್ಟಿಗ್ರಾಫ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಕಳುಹಿಸುವ ಸಲುವಾಗಿ)
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

Scanned with CamScanner

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕೆಎಸ್‌ಎಫ್‌ಸಿ/ಹಣಕಾಸು ಸಂಸ್ಥೆಗಳ ಮುಖಾಂತರ ಬಿಡುಗಡೆ ಮಾಡಿರುವ ಸಾಫ್ಟ್‌ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯವನ್ನು ಮನ್ನಾ ಮಾಡಲು ಕುರಿತು.

ಓದಲಾಗಿದೆ: 1.ಆಯುಕ್ತರು, ಪತ್ರಸಂಖ್ಯೆ:ಜಿಕೈಕೇ/ಅಧೀ/ವಿಘಯೋ/ಗಿಉಯೋ/ಸಾಸೀಕ್ಯಾ/12/2016-17 ಇವರ ದಿ:09.11.2017.
2.ಆಯುಕ್ತರು,ಪತ್ರಸಂಖ್ಯೆ:ಕೈವಾಇ/ಜಿಕೈಕೇ/ಸಸೀಕ್ಯಾ/2017-18 ಇವರ ದಿ:30.12.2017 ಮತ್ತು 28.11.2016.

* * * * *

**ಪ್ರಸ್ತಾವನೆ:**

2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 403(ಡಿ)ರಲ್ಲಿ *"2010-11ರಿಂದ ದಿ:31.03.2017ರ ವರೆಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆಗಳು ಬೀಜಧನ ಬಂಡವಾಳ ಯೋಜನೆಯಡಿಯಲ್ಲಿ ಪಡೆದಿರುವ ರೂ.46.00 ಕೋಟಿಗಳ ಸಾಲ ಮನ್ನಾ ಮಾಡಲಾಗುವುದು"* ಎಂದು ಘೋಷಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂ: (1)ರ ಪತ್ರದಲ್ಲಿ ಆಯುಕ್ತರು ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಬೆಂಗಳೂರು ಇವರು 2010-11ನೇ ಸಾಲಿನಿಂದ ದಿ:31.03.2017ರ ವರೆಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆಗಳು ಬೀಜಧನ ಬಂಡವಾಳ ಯೋಜನೆಯಡಿಯಲ್ಲಿ ಮಂಜೂರಾದ ಘಟಕಗಳಿಗೆ ಬಿಡುಗಡೆಯಾದ ಸಾಲವನ್ನು ಮನ್ನಾ ಮಾಡುವ ಹಿನ್ನಲೆಯಲ್ಲಿ ಕೆ.ಎಸ್.ಎಫ್.ಸಿ ಬೆಂಗಳೂರು ರವರಿಂದ ಘಟಕವಾರು, ವರ್ಷವಾರು ಮತ್ತು ವರ್ಗವಾರು ವಿವರಗಳನ್ನು ಪಡೆದು ಹಾಗೂ ಇತರೆ ಬ್ಯಾಂಕುಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರಗಳಿಂದ ಕ್ರೋಢೀಕರಿಸಿದ ವಿವರಗಳನ್ನು ಈ ಕೆಳಕಂಡಂತೆ ಕಳುಹಿಸಿರುತ್ತಾರೆ.

(ರೂ.ಗಳಲ್ಲಿ)

| ಹಣಕಾಸು ಸಂಸ್ಥೆಗಳು | ಜಾತಿ ವಿವರ | ಘಟಕಗಳ ಸಂಖ್ಯೆ | ಮಂಜೂರು ಮಾಡಿದ ಮೊತ್ತ | ಬಿಡುಗಡೆ ಮಾಡಿದ ಘಟಕಗಳ ಸಂಖ್ಯೆ | ಬಿಡುಗಡೆ ಮಾಡಿದ ಮೊತ್ತ | ಸಾಲ ವಸೂಲಾತಿ ಮಾಡಿದ ಮೊತ್ತ | ಸಾಲ ವಸೂಲು ಮಾಡಬೇಕಾದ ಮೊತ್ತ |
|---|---|---|---|---|---|---|---|
| KSFC & OTHER | SC | KSFC-243 | 334574500 | 238 | 327789500 | 26375412 | 301414088 |
| | | Other Banks-45 | 45818000 | 45 | 45818000 | 0.000000 | 45818000 |
| | ST | KSFC-78 | 76641500 | 75 | 75054500 | 7795331 | 67259169 |
| | | Other Banks-21 | 15981000 | 21 | 15981000 | 0.000000 | 15981000 |
| Grand Total | | 387 | 473015000 | 379 | 464643000 | 34170743 | 430472257 |

Scanned by CamScanner

ಕೆ.ಎಫ್.ಎಸ್.ಸಿ ಬೆಂಗಳೂರು ಸಂಸ್ಥೆ ವತಿಯಿಂದ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದವರ ಘಟಕಗಳಿಗೆ ಸಾಲ ಬಿಡುಗಡೆಯಾದ ಹಾಗೂ ವಸೂಲಾತಿಯಾದ ವಿವರಗಳನ್ನು ಪ್ರತ್ಯೇಕವಾಗಿ ಸಲ್ಲಿಸುತ್ತಾ ಹಾಗೂ ಕೆ.ಎಫ್.ಎಸ್.ಸಿ ಹೊರತು ಪಡಿಸಿ ಇತರೆ ಬ್ಯಾಂಕುಗಳಿಗೆ / ಹಣಕಾಸು ಸಂಸ್ಥೆಗಳಿಗೆ ಸಂಬಂಧಿಸಿದಂತೆ, 2010–11 ರಿಂದ 31.03.2017 ರವರೆಗೆ ಜಿಲ್ಲಾ ಕೈಗಾರಿಕಾ ಕೇಂದ್ರಗಳ ಮುಖಾಂತರ ಬೀಜಧನ ಆರ್ಥಿಕ ಸಹಾಯ ಬಿಡುಗಡೆಯಾದ ವರ್ಷವಾರು / ಘಟಕವಾರು ವಿವರಗಳನ್ನು ಸಲ್ಲಿಸುತ್ತಾ, ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಬೆಂಗಳೂರು ಇವರು ಈ ಯೋಜನೆಯನ್ನು ಜಾರಿಗೆ ತರುವ ಕುರಿತಂತೆ ಸರ್ಕಾರಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸರ್ಕಾರವು ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 145 ಸಪ್ರಕೈ 2017, ಬೆಂಗಳೂರು, ದಿನಾಂಕ:26.02.2018.**

2017–18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 403(ಡಿ)ರಲ್ಲಿ 2010–11ರಿಂದ ದಿ:31.03.2017ರ ವರೆಗೆ ಬೀಜಧನ ಬಂಡವಾಳ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಕೆ.ಎಸ್.ಎಫ್.ಸಿ ಮತ್ತು ಇತರೆ ಬ್ಯಾಂಕುಗಳ ಮೂಲಕ ಬಿಡುಗಡೆಯಾಗಿ, ವಸೂಲಾತಿ ಆಗದೇ ಇರುವ ಬೀಜಧನ ಸಹಾಯ ಮೊತ್ತ ರೂ.43,04,72,257/–ಗಳ ಸಾಲ ಮನ್ನಾ ಮಾಡಲು ಸರ್ಕಾರದ ಅನುಮೋದನೆ ನೀಡಲಾಗಿದೆ.

*ಈ ಆದೇಶವನ್ನು, ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:419 ವೆಚ್ಚ–1 2017 ದಿ:21.11.2017 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 38 ಎಫ್ಆರ್ಓ 2017ರಲ್ಲಿ ದಿ:22.05.2017 ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.*

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Nagaraja, 26/02/2018
(ಎಸ್. ನಾಗರಾಜ)
ಪೀಠಾಧಿಕಾರಿ [ಸಪ್ರಕೈ],
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಈ ಶಾಖೆಗೆ ಒದಗಿಸಲು ಕೋರಿದೆ.

ಪ್ರತಿಗಳು:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ. 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂ.5398, ಬೆಂಗಳೂರು–560001.
2. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ.5329, ಬೆಂಗಳೂರು–560001.

Scanned by CamScanner

3. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
4. ಸರ್ಕಾರದ ಮುಖ್ಯಕಾರ್ಯದರ್ಶಿಯವರ, ಆಪ್ತ ಕಾರ್ಯದರ್ಶಿ, *(ಸಚಿವ ಸಂಪುಟ ಪ್ರಕರಣ ಸಂಖ್ಯೆ:ಸಿ115/2018)*ವಿಧಾನ ಸೌಧ, ಬೆಂಗಳೂರು-01.
5. ಅಧಿಕ ನಿರ್ದೇಶಕರು[ಜಿಕೈಕೇ] ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
6. ಜಂಟಿ ನಿರ್ದೇಶಕರು [ಯೋಜನೆ], ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು-1.
8. ಉಪ ನಿರ್ದೇಶಕರು, TNMC, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು-1.
10. ಸರ್ಕಾರದ ಕಾರ್ಯದರ್ಶಿ, ಯೋಜನಾ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
12. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1.
13. ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು-01.
14. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
15. ಹೆಚ್ಚುವರಿ ಪ್ರತಿಗಳು ರಕ್ಷಾ ಕಡತಕ್ಕೆ

Scanned by CamScanner